## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2011-12ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಜಿಲ್ಲಾ ಪಂಚಾಯತಿ ಅಧ್ಯಕ್ಷರುಗಳಿಗೆ ವಾರ್ಷಿಕವಾಗಿ ಒಂದು ಕೋಟಿ ರೂ.ಗಳ ಅಭಿವೃದ್ಧಿ ಅನುದಾನವನ್ನು ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ವಾರ್ಷಿಕವಾಗಿ ಒದಗಿಸಲಾಗಿರುವ ಒಂದು ಕೋಟಿ ರೂ. ಗಳ ಅನಿರ್ಬಂಧಿತ ಅನುದಾನವನ್ನು ಅಭಿವೃದ್ಧಿ ಕಾರ್ಯಕ್ರಮಗಳಿಗೆ ವಿನಿಯೋಗಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರಿ ಆದೇಶ ಸಂ.ಗ್ರಾಅಪ:127:ಜಿಪಸ:2011, ದಿನಾಂಕ: 25-05-2011
2) ಸರ್ಕಾರಿ ಆದೇಶ ಸಂ.ಗ್ರಾಅಪ:127:ಜಿಪಸ:2011, ದಿನಾಂಕ: 23-09-2011

ಪ್ರಸ್ತಾವನೆ :

ಮೇಲೆ ಓದಲಾದ (1) ರ ಆದೇಶದಲ್ಲಿ 2011-12ನೇ ಸಾಲಿನಲ್ಲಿ ಜಿಲ್ಲೆಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಉದ್ದೇಶದಿಂದ ಜಿಲ್ಲಾ ಪಂಚಾಯತ್ ಅಧ್ಯಕ್ಷರುಗಳಿಗೆ ₹ 1.00 ಕೋಟಿ ಅನಿರ್ಬಂಧಿತ ಅನುದಾನ ಬಿಡುಗಡೆ ಮಾಡಲಾಗಿತ್ತು.

ಮೇಲೆ ಓದಲಾದ (2) ರಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಬಳಸಬೇಕು ಹಾಗೂ ಯಾವ ಕಾಮಗಾರಿಗಳಿಗೆ ಬಳಸಬಾರದೆಂಬ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು. ದಿನಾಂಕ: 18-10-2011 ರಂದು ನಡೆದ ರಾಜ್ಯ ಜಿಲ್ಲಾ ಪಂಚಾಯತ್ ಅಧ್ಯಕ್ಷರುಗಳ ಒಕ್ಕೂಟದ ಸಭೆಯಲ್ಲಿ ಅಧ್ಯಕ್ಷರುಗಳು ಈ ಅನುದಾನ ಅನುಮೋದನೆ ಹಾಗೂ ಅನುಷ್ಠಾನ ಜಿಲ್ಲಾ ಪಂಚಾಯತ್ ಹಂತದಲ್ಲಿಯೇ ತೆಗೆದುಕೊಳ್ಳಲು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರ ಹಿನ್ನೆಲೆಯಲ್ಲಿ ಮನವಿ ಪರಿಶೀಲಿಸಿದ ಸರ್ಕಾರ, ಆಡಳಿತ ವಿಕೇಂದ್ರೀಕರಣ ಹಾಗೂ ಕಾರ್ಯಕ್ರಮ ಅನುಷ್ಠಾನವನ್ನು ತ್ವರಿತಗೊಳಿಸುವ ಉದ್ದೇಶದಿಂದ ದಿನಾಂಕ: 15-07-2011 ರ ಆದೇಶದಲ್ಲಿ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆಗೆ ಬದಲಾಗಿ ಜಿಲ್ಲಾ ಪಂಚಾಯತ್ ಅಧ್ಯಕ್ಷರು ಮಾರ್ಗಸೂಚಿ ಅನ್ವಯ ಕ್ರಿಯಾ ಯೋಜನೆ ತಯಾರಿಸಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಸಲ್ಲಿಸಿ, ಸದರಿ ಕ್ರಿಯಾ ಯೋಜನೆ ಮಾರ್ಗಸೂಚಿಗಳನ್ವಯ ಇರುವುದನ್ನು ಖಚಿತಪಡಿಸಿಕೊಂಡು ಚಾಲ್ತಿಯಲ್ಲಿರುವ ನಿಯಮಗಳನ್ವಯ ಕಾರ್ಯಕ್ರಮ ಅನುಷ್ಠಾನಗೊಳಿಸಲು ನಿರ್ದೇಶಿಸುವುದು ಸೂಕ್ತವೆಂದು ಭಾವಿಸಿದೆ. ಅದರಂತೆ ಈ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ: 123:ಜಿಪಸ:2011 ಬೆಂಗಳೂರು ದಿನಾಂಕ: 29-10-2011

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಆಡಳಿತ ವಿಕೇಂದ್ರೀಕರಣ ಹಾಗೂ ಕಾರ್ಯಕ್ರಮ ಅನುಷ್ಠಾನ ತ್ವರಿತವಾಗಿ ಜಾರಿಗೆ ತರಲು ಅನುವಾಗುವಂತೆ ಜಿಲ್ಲಾ ಪಂಚಾಯತ್ ಅಧ್ಯಕ್ಷರಿಗೆ ಬಿಡುಗಡೆಗೊಳಿಸಲಾಗಿದ್ದ ₹ 1.00 ಕೋಟಿ ಅನಿರ್ಬಂಧಿತ ಅನುದಾನ ಬಳಕೆಗೆ ಸಂಬಂಧಿಸಿದಂತೆ ದಿನಾಂಕ: 15-7-2011 ರ ಸರ್ಕಾರಿ ಆದೇಶದಲ್ಲಿ ಸೂಚಿಸಲಾಗಿದ್ದ, ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ಬದಲಾಗಿ ಆಯಾ ಜಿಲ್ಲಾ ಪಂಚಾಯತ್ ಅಧ್ಯಕ್ಷರು ಮಾರ್ಗಸೂಚಿಗಳನ್ವಯ ಕ್ರಿಯಾ ಯೋಜನೆ ತಯಾರಿಸಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸತಕ್ಕದ್ದು. ಹೀಗೆ ಸಲ್ಲಿಸಲಾದ ಕ್ರಿಯಾ ಯೋಜನೆಯು ಮಾರ್ಗಸೂಚಿಗಳನ್ವಯ ಇದೆಯೇ ಎಂಬುದನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಖಚಿತಪಡಿಸಿಕೊಂಡು ಚಾಲ್ತಿಯಲ್ಲಿರುವ ನಿಯಮಗಳನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರ ಅನುಮೋದನೆ ನೀಡಿದೆ.

ಜಿಲ್ಲಾ ಪಂಚಾಯತ್ ಅಧ್ಯಕ್ಷರುಗಳಿಗೆ ಹಾಗೂ ತಾಲ್ಲೂಕು ಪಂಚಾಯತ್‌ಗಳಿಗೆ ನೀಡಿರುವ ₹ 1.00 ಕೋಟಿ ಅನಿರ್ಬಂಧಿತ ಅನುದಾನದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಅಭಿವೃದ್ಧಿಗಾಗಿ ಕನಿಷ್ಠ 25% ರಷ್ಟು ವೆಚ್ಚ ಮಾಡುವುದನ್ನು ಕಡ್ಡಾಯಗೊಳಿಸಲಾಗಿದೆ.

ಕ್ರಿಯಾ ಯೋಜನೆಗಳನ್ನು ಮಾಹಿತಿಗಾಗಿ ಸರ್ಕಾರಕ್ಕೆ ಈ-ಮೇಲ್ ಮುಖಾಂತರ ಸಲ್ಲಿಸತಕ್ಕದ್ದು ಹಾಗೂ ಯೋಜನೆ ಅನುಷ್ಠಾನಗೊಳಿಸುವ ಪೂರ್ವದಲ್ಲಿ ವರ್ಕ್ ಸಾಫ್ಟ್ ಸಾಫ್ಟ್‌ವೇರ್ ನಲ್ಲಿ ಅಳವಡಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(signature) 29/10/11
(ಸ್ವರ್ಣಲತ ಎಂ.ಭಂಡಾರೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಗೆ-

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
3) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ. ಇಲಾಖೆ
4) ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು,
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6) ಸರ್ಕಾರದ ಕಾರ್ಯದರ್ಶಿಗಳು (ಜಿ.ಪಂ.) ಗ್ರಾಅಪ ಇಲಾಖೆ ಇವರ ಆಪ್ತ ಸಹಾಯಕರು.
7) ಕರ್ನಾಟಕ ವಿಕಾಸ/ಮಾಹಿತಿ ಕೇಂದ್ರ/ವೆಬ್‌ಸೈಟ್.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ